## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **573(695)** |
| ಸದಸ್ಯರ ಹೆಸರು | : ಶ್ರೀ ಡಾ|| ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 18.08.2025 |
| ಉತ್ತರಿಸುವ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ಅನುದಾನಿತ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2015 ರಿಂದ 2020 ರವರೆಗೆ ಖಾಲಿಯಿರು ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಅನುಮತಿ ನೀಡಲಾಗಿದೆ; ನೀಡಿದ್ದಲ್ಲಿ, ಆದೇಶದ ಪ್ರತಿ ನೀಡುವುದು; | ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ.01.01.2016 ರಿಂದ 31.12.2020 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಎಸ್‌ಇಎಸ್ 2021 ದಿನಾಂಕ: 07.08.2024 ರಲ್ಲಿ ಅನುಮೋದನೆ ನೀಡಲಾಗಿರುತ್ತದೆ. ಆದೇಶದ ಪ್ರತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಈ ಆದೇಶದ ಅನ್ವಯ ನೇಮಕಾತಿ ಪ್ರಕ್ರಿಯೆ ನಡೆಸಲಾಗುತ್ತಿದೆಯೇ; ನಡೆಸುತ್ತಿದ್ದಲ್ಲಿ, ಯಾವ ತಂತ್ರಾಂಶದ ಮೂಲಕ ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ; ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಂಡಿದ್ದಲ್ಲಿ ಕಾರಣಗಳನ್ನು ನೀಡುವುದು; | ಸರ್ಕಾರದ ಆದೇಶ ಸಂಖ್ಯೆ.ಇಪಿ 396 ಎಸ್‌ಇಎಸ್ 2021, ದಿನಾಂಕ:07.08.2024 ರಲ್ಲಿ ಆನ್‌ಲೈನ್ ಮುಖಾಂತರ ನೇಮಕಾತಿ ಮಾಡಲು ತಿಳಿಸಲಾಗಿದೆ. ಅದರಂತೆ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿನ ದಿನಾಂಕ.01.01.2016 ರಿಂದ 31.12.2020 ರವರೆಗಿನ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ತಂತ್ರಾಂಶ ಅಭಿವೃದ್ಧಿಗೆ ಕ್ರಮವಹಿಸಲಾಗಿದೆ<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024 ದಿನಾಂಕ: 25.11.2024 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇಮಕಾತಿಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರನೇಮಕಾತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸುವಂತಿಲ್ಲ ಎಂದು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ಖಾಲಿ ಹುದ್ದೆ ಪ್ರಕ್ರಿಯೆಯನ್ನು ಮುಂದಿನ ಸರ್ಕಾರದ ಆದೇಶದವರೆಗೆ ಸ್ಥಗಿತಗೊಳಿಸಲಾಗಿದೆ. |
| ಇ) | ಈಗಾಗಲೇ ಈ ತಂತ್ರಾಂಶದ ಮೂಲಕ ಖಾಲಿಯಿರುವ ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳ ನೇಮಕಾತಿ ಅರ್ಜಿಗಳು ಅಥವಾ ಪ್ರಸ್ತಾವನೆಗಳು ಸ್ವೀಕೃತಗೊಂಡಿವೆ; ಸ್ವೀಕೃತಗೊಂಡಿರುವ ಪ್ರಸ್ತಾವನೆಗಳಲ್ಲಿ ಎಷ್ಟು ಆದೇಶ ನೀಡಲಾಗಿದೆ; | ಅಭಿವೃದ್ಧಿ-ಪಡಿಸಲಾಗುತ್ತಿರುವ ತಂತ್ರಾಂಶದ ಮೊದಲ ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್ ನಲ್ಲಿ ಅನುದಾನಿತ ಪ್ರೌಢ ಶಾಲೆಗಳ ಮಂಜೂರಾದ / ಕಾರ್ಯನಿರತ ಮತ್ತು ಅರ್ಹ ಬೋಧಕ ಖಾಲಿ ಹುದ್ದೆಗಳ ಮಾಹಿತಿ ಇಂದೀಕರಿಸುವ ಪ್ರಕ್ರಿಯೆ ಒಳಗೊಂಡಿದ್ದು ಈ ಹಂತದಲ್ಲಿ ಯಾವುದೇ ರೋಸ್ಟರ್ ಬಿಂದು ನಿಗದಿಪಡಿಸುವ |

| | | |
|---|---|---|
| | | ಪ್ರಕ್ರಿಯೆ ಇಲ್ಲದೆ ಇರುವುದರಿಂದ ಮೊದಲ ಹಂತದ ತಂತ್ರಾಂಶ ಬಿಡುಗಡೆ ಮಾಡಲಾಗಿದೆ. ತಂತ್ರಾಂಶದಲ್ಲಿ ಈ ಹಂತದಲ್ಲಿ ಆಡಳಿತ ಮಂಡಳಿಗಳಿಗೆ ಪ್ರಸ್ತಾವನೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. |
| ಈ) | ಈ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ಸಲ್ಲಿಸಲು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ತೊಂದರೆಯಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಳೀಕರಣಗೊಳಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು? | ಈ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ಸಲ್ಲಿಸಲು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರಕ್ಕೆ ಯಾವುದೇ ದೂರುಗಳು ಬಂದಿರುವುದಿಲ್ಲ. |

**ಸಂಖ್ಯೆ: ಇಪಿ 262 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಯು 2011, ದಿನಾಂಕ: 30.09.2011
2. ಸರ್ಕಾರದ ಆದೇಶ ಸಂಖ್ಯೆ:ಇಪಿ 14 ಎಸ್‌ಇಪಿ 2017, ದಿನಾಂಕ: 29.06.2017, 25.09.2017 ಮತ್ತು 06.03.2019
3. ನಿರ್ದೇಶಕರು (ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ:ಸಿ8(1)ಶಾಶಿಅಖಾ ಹುಮಾ67/2021-22, ದಿನಾಂಕ:20.09.2022.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡರವರ ಪತ್ರ ಸಂಖ್ಯೆ:ಜಿ13:ಶಾಶಿಅ:ಖಾಹುಭ:03:2020-21/1148, ದಿನಾಂಕ:21.02.2022.
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿರವರ ಪತ್ರ ಸಂಖ್ಯೆ:ಸಿ4(6):ಖಾಪ್ರೌಶಾ:ಅಅನೇ:ಇತರ:2021-22/2075, ದಿನಾಂಕ:21.02.2022

*****

(6) 9/8/24

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶ ಸಂಖ್ಯೆ:ಇಡಿ 77 ಎಸ್‌ಇಪಿ 2007 (ಭಾಗ) ದಿನಾಂಕ:31-03-2008 ರಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ 401 ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದ್ದು, ಈ ಪೈಕಿ ವಿವಿಧ ಕಾರಣದಿಂದ ತುಂಬದೇ ಬಾಕಿ ಇರುವ 189 ಹುದ್ದೆಗಳನ್ನು ಮತ್ತು ದಿನಾಂಕ:01-07-2008 ರ ನಂತರ ನಿಧನ, ನಿವೃತ್ತಿ, ರಾಜಿನಾಮೆ, ಸಕ್ಷಮ ಪ್ರಾಧಿಕಾರದಿಂದ ಅನುಮೋದಿತವಾದ ಬಡ್ತಿ ಮೂಲಕ ತೆರವಾದ ಮತ್ತು ಇತರ ಕಾರಣಗಳಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬಲು ಷರತ್ತುಗಳಿಗೊಳಪಟ್ಟು ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿ, ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಇತರೆ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳನ್ನು ಸೂಕ್ತ ಪ್ರಾಧಿಕಾರದ ಅನುಮೋದನೆ ಪಡೆದು ಬಡ್ತಿ ಹೊಂದಿರುವ ಹಾಗೂ ಇತರೆ ಕಾರಣಗಳಿಂದ ದಿನಾಂಕ:31.12.2012 ರವರೆಗೆ ಖಾಲಿಯಾದ ಹುದ್ದೆಗಳನ್ನು ಹೆಚ್ಚುವರಿ ಪ್ರಕ್ರಿಯೆಯಲ್ಲಿ ಬಳಸಿಕೊಂಡು ನಂತರ ಬಾಕಿ ಉಳಿದ ಬೋಧಕ ಹುದ್ದೆಗಳನ್ನು ಹಾಗೂ

ದಿನಾಂಕ:01.01.2013 ರಿಂದ 31.12.2014 ರವರೆಗೆ ಹಾಗೂ 01.01.2015 ರಿಂದ 31.12.2015 ರವರೆಗೆ ಖಾಲಿಯಾದ ಬೋಧಕ ಹುದ್ದೆಗಳನ್ನು ಹೆಚ್ಚುವರಿ ಪ್ರಕ್ರಿಯೆಯಲ್ಲಿ ಬಳಸಿಕೊಂಡ ನಂತರ ಬಾಕಿ ಉಳಿದ ಬೋಧಕ ಹುದ್ದೆಗಳನ್ನು (ವೃತ್ತಿ / ಚಿತ್ರಕಲಾ / ಸಂಗೀತ ಹಾಗೂ ಮುಂತಾದ ವಿಶೇಷ ಶಿಕ್ಷಕರನ್ನು ಹೊರತುಪಡಿಸಿ) ಭರ್ತಿ ಮಾಡುವ ಷರತ್ತಿಗೊಳಪಟ್ಟು ಆರ್ಥಿಕ ಮಿತ್ಯವ್ಯಯ ಸಡಿಲಿಸಿ ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (3), (4) ಮತ್ತು (5) ರನ್ವಯ ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016 ರಿಂದ ದಿನಾಂಕ:31.12.2020 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಖಾಲಿ ಇರುವ ಬೋಧಕ ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಸಿ ಭರ್ತಿ ಮಾಡಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ಹಾಗೂ ನಿರ್ದೇಶಕರು [ಪ್ರೌಢ], ಬೆಂಗಳೂರು ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಇಪಿ 396 ಎಸ್‌ಇಎಸ್ 2021 ಬೆಂಗಳೂರು, ದಿನಾಂಕ:07.08.2024

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 1994-95 ರ ಶೈಕ್ಷಣಿಕ ಅವಧಿಗೆ ಪೂರ್ವದಲ್ಲಿ ಪ್ರಾರಂಭಗೊಂಡು ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಖಾಸಗಿ ಅನುದಾನಿತ ಪ್ರೌಢಶಾಲೆಗಳು, ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ ದಿನಾಂಕ:31.12.2020 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಮತ್ತಿತರ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಭರ್ತಿ ಮಾಡಿಕೊಳ್ಳಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:**

1. ಹುದ್ದೆಗಳನ್ನು ಭರ್ತಿ ಮಾಡಿಕೊಂಡ ನಂತರ ನೇಮಕಾತಿ ಅನುಮೋದನೆಗಾಗಿ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 384 ವೆಚ್ಚ-8/2013, ದಿನಾಂಕ: 09.04.2013 ರಲ್ಲಿನ ಚೆಕ್‌ಲಿಸ್ಟ್ ಅನುಬಂಧ-3ರನ್ವಯ ಸಂಪೂರ್ಣ ಮಾಹಿತಿ/ದಾಖಲೆಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

2. ಮೇಲ್ಕಂಡಂತೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಜಾರಿಯಲ್ಲಿರುವ ಅನುದಾನ ಸಂಹಿತೆ ಮತ್ತು ಸರ್ಕಾರದ ಆದೇಶ ಮತ್ತು ಸುತ್ತೋಲೆಗಳ ನಿಯಮಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳುವುದು.

3. ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಾಗ ನಿಯಮಾನುಸಾರ ರೋಸ್ಟರ್ ಬಿಂದು ಮತ್ತು ಕಲ್ಯಾಣ ಕರ್ನಾಟಕದ ಮೀಸಲಾತಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

4. 2016-17 ರಿಂದ 2023-24ನೇ ಸಾಲಿನವರೆಗೆ ವಿದ್ಯಾರ್ಥಿಗಳ ದಾಖಲಾತಿ, ಪರೀಕ್ಷಾ ಫಲಿತಾಂಶ ಮತ್ತು ಮೂಲಭೂತ ಸೌಕರ್ಯಗಳು ಉತ್ತಮವಾಗಿರುವುದನ್ನು ಖಚಿತಪಡಿಸಿಕೊಳ್ಳುವುದು.

5. ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಶಾಲಾ/ಕಾಲೇಜುಗಳು ಪ್ರಾರಂಭವಾದಾಗಿನಿಂದ ಅವಿಚ್ಛಿನ್ನವಾಗಿ ನಡೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು.

6. ಅನುದಾನಿತ ಶಾಲೆಗಳು ಮತ್ತು ಕಾಲೇಜುಗಳು ಆನ್‌ಲೈನ್ ಮೂಲಕ ವಿವರಗಳು ಮತ್ತು ದಾಖಲೆಗಳನ್ನು ಸಲ್ಲಿಸಲು ತಂತ್ರಾಂಶವನ್ನು ಅಭಿವೃದ್ಧಿಪಡಿಸುವುದು. ಈ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ವ್ಯವಹರಿಸುವುದು.

7. ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿನ ಹುದ್ದೆಗಳನ್ನು ಅನುಮೋದಿಸಲು ಪ್ರತ್ಯಾಯೋಜಿಸಲಾದ ಆದೇಶ ಸಂಖ್ಯೆ:ಇಡಿ 16 ಟಿಪಿಯು 2011, ದಿನಾಂಕ:30.09.2011 ಅನ್ನು ಹಿಂಪಡೆಯಲಾಗಿದ್ದು, ಹುದ್ದೆಗಳ ಅನುಮೋದನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 880 ವೆಚ್ಚ-8/2022 ದಿನಾಂಕ: 31.07.2024 ಹಾಗೂ 06.08.2024ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

7/8/24

**(ಎಸ್. ಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರೌಢ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

O/C

**ಇವರಿಗೆ:**

1. ಮಹಾಲೇಖಪಾಲರು (ಎ & ಇ), ಕರ್ನಾಟಕ ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಶಾಲಾ ಶಿಕ್ಷಣ (ಪದವಿ ಪೂರ್ವ), ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
6. ನಿರ್ದೇಶಕರು (ಪ್ರೌಢ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯುಕ್ತರ / ಅಪರ ಆಯುಕ್ತರ ಮೂಲಕ)
9. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ (ಆಯುಕ್ತರ /ಅಪರ ಆಯುಕ್ತರುಗಳ ಮೂಲಕ).
10. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು :-**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ವಿಶೇಷ ಕಾರ್ಯದರ್ಶಿರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು